ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

2019-20ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಬಗ್ಗೆ

ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-

1463 (1719) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019-20ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಹೊಸದಾಗಿ ವಿದ್ಯಾರ್ಥಿ ವೇತನದ ಅರ್ಜಿಗಳನ್ನು ಆಹ್ವಾನಿಸಬಾರದು ಎಂಬುದಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿಗಳಿಗೆ ಸುತ್ತೋಲೆ ಹೊರಡಿಸಿರುವುದು ಹಾಗೂ ಪತ್ರ ಬರೆದಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅಂದಾಜು ಎಷ್ಟು ಹೊಸ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಸಾಧ್ಯವಾಗಿರುವುದಿಲ್ಲ ;

(ಇ) ಈ ರೀತಿ ಸುತ್ತೋಲೆ ಹೊರಡಿಸಲು ಕಾರಣಗಳೇನು ;

(ಈ) ಈ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?